## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 330(428) |
| ಸದಸ್ಯರ ಹೆಸರು | : | ಶ್ರೀ ಮಧು ಜಿ ಮಾದೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 10.03.2025 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2024-25ನೇ ಸಾಲಿನಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಲು ಕೈಗೊಂಡ ಸಮೀಕ್ಷಾ ಕಾರ್ಯ ಪೂರ್ಣಗೊಂಡಿದೆಯೇ; | ಸಮೀಕ್ಷೆ ಕಾರ್ಯವು ಅಂತಿಮ ಹಂತದಲ್ಲಿರುತ್ತದೆ. |
| ಆ) | ಇದ್ದಲ್ಲಿ, ಸಮೀಕ್ಷೆಯಲ್ಲಿ ಗುರುತಿಸಲ್ಪಟ್ಟ ಶಾಲೆಯಿಂದ ಹೊರಗುಳಿದ ಮಕ್ಕಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಹಾಗೂ ಮಂಡ್ಯ ಮೈಸೂರು, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಸಂಬಂಧಿಸಿದಂತೆ ತಾಲ್ಲೂಕುವಾರು ಮಾಹಿತಿ ನೀಡುವುದು) | |
| ಇ) | ಸಮೀಕ್ಷೆ ಕಾರ್ಯದ ಅವಧಿ, ಸಮೀಕ್ಷೆಗೆ ಒಳಪಡಿಸಿದ ಮಕ್ಕಳ ವಯೋಮಾನ, ಗಣತಿದಾರರ ಸಂಖ್ಯೆ ಎಷ್ಟು (ಸಮೀಕ್ಷಾ ವಿಧಾನ ಕುರಿತು ಸಂಪೂರ್ಣ ಮಾಹಿತಿ ನೀಡುವುದು) | • ಸಮೀಕ್ಷೆ ಕಾರ್ಯವು ಜುಲೈ-2024 ರಿಂದ ಪ್ರಾರಂಭವಾಗಿ ಪ್ರಗತಿಯಲ್ಲಿರುತ್ತದೆ.<br>• 6 ರಿಂದ 18 ವರ್ಷ ವಯೋಮಾನದ ಮಕ್ಕಳನ್ನು ಸಮೀಕ್ಷೆಗೆ ಒಳಪಡಿಸಲಾಗಿದೆ.<br>• ಸಮೀಕ್ಷೆ ಕಾರ್ಯದಲ್ಲಿ ಭಾಗವಹಿಸಿದ ಗಣತಿದಾರರ ವಿವರ: |

| ಕ್ರಮ ಸಂ | ಇಲಾಖೆಗಳು | ಗಣತಿದಾರರ ಸಂಖ್ಯೆ |
|---|---|---|
| 01 | RDPR | 36000 |
| 02 | UDD | 9000 |

<table>
<tr><td></td><td></td><td>
<table><tr><td>03</td><td>BBMP</td><td>4000</td></tr></table>
<ul>
<li>ಸಮೀಕ್ಷೆ ಕಾರ್ಯವು ಪ್ರಗತಿಯಲ್ಲಿರುವುದರಿಂದ ಸಮೀಕ್ಷೆ ಪೂರ್ಣಗೊಂಡ ನಂತರ ಗಣತಿದಾರರ ನಿಖರವಾದ ಮಾಹಿತಿ ಲಭ್ಯವಾಗುತ್ತದೆ.</li>
<li>ಅಂತರ್ ಇಲಾಖಾ ಸಮಿತಿ ಸಭೆ (IDCC) ಯಲ್ಲಿ ಸೂಚಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ನಗರಾಭಿವೃದ್ಧಿ ಇಲಾಖೆ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇಲಾಖೆಗಳಿಂದ ಸಮೀಕ್ಷೆ ಕಾರ್ಯ ಹಮ್ಮಿಕೊಳ್ಳಲಾಗಿರುತ್ತದೆ.</li>
<li>ಸಮೀಕ್ಷೆಯು ಹೆಚ್ಚು ಪರಿಣಾಮಕಾರಿ ಹಾಗೂ ಪಾರದರ್ಶಕವಾಗಲು ನಾಗರೀಕ ಸೇವೆಗಳ ಎಲೆಕ್ಟ್ರಾನಿಕ್ ಡೆಲಿವರಿ ನಿರ್ದೇಶನಾಲಯ (EDCS) ಇ–ಆಡಳಿತ ರವರಿಂದ ಮೊಬೈಲ್ APP ಅನ್ನು ಅಭಿವೃದ್ಧಿಪಡಿಸಲಾಗಿದೆ.</li>
<li>ಸಮೀಕ್ಷೆಯ ವರದಿಯನ್ನು SATS ಹಾಗೂ ಕುಟುಂಬ APP ನೊಂದಿಗೆ ಮರು ಪರಿಶೀಲನೆ ಮಾಡಲು ಸೂಚಿಸಲಾಗಿದೆ.</li>
</ul>
</td></tr>
<tr><td>ಈ)</td><td>ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಯಾವ ಯಾವ ಇಲಾಖೆಗಳ ಸಹಭಾಗಿತ್ವದಲ್ಲಿ ಸಮೀಕ್ಷೆ ಕೈಗೊಳ್ಳಲಾಗಿದೆ; (ವಿವರ ನೀಡುವುದು)</td><td>ಗ್ರಾಮೀಣ ಪ್ರದೇಶಗಳಲ್ಲಿ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ (RDPR), ಮತ್ತು ನಗರ ಪ್ರದೇಶಗಳಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (BBMP) ಮತ್ತು ನರಾಭಿವೃದ್ಧಿ (UDD) ಇಲಾಖೆಗಳ ಸಹಭಾಗಿತ್ವದಲ್ಲಿ ಸಮೀಕ್ಷೆ ಕೈಗೊಳ್ಳಲಾಗಿದೆ.</td></tr>
<tr><td>ಉ)</td><td>ಸಮೀಕ್ಷೆಯಲ್ಲಿ ಗುರುತಿಸಿ ಶಾಲೆಗಳಿಗೆ ದಾಖಲಿಸಿದ ಮಕ್ಕಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)</td><td>2024–25ನೇ ಸಾಲಿನ ಸಮೀಕ್ಷೆ ಕಾರ್ಯವು ಪ್ರಗತಿಯಲ್ಲಿರುವುದರಿಂದ ಸಮೀಕ್ಷೆ ಕಾರ್ಯವು ಪೂರ್ಣಗೊಂಡ ನಂತರ ಶಾಲೆಯಿಂದ ಹೊರಗುಳಿದ</td></tr>
</table>

<table>
<tr><td></td><td></td><td>ಮಕ್ಕಳನ್ನು ಶಾಲೆಗೆ ದಾಖಲಿಸಿ ಶೈಕ್ಷಣಿಕ ಮುಖ್ಯ ವಾಹಿನಿಗೆ ತರಲಾಗುವುದು</td></tr>
<tr><td>ಊ)</td><td>ಸಮೀಕ್ಷೆಯಲ್ಲಿ ಗುರುತಿಸಿ, ದಾಖಲಾಗದ ಮಕ್ಕಳನ್ನು ಶೈಕ್ಷಣಿಕ ಮುಖ್ಯ ವಾಹಿನಿಗೆ ತರಲು ಕೈಗೊಂಡಿರುವ ಕ್ರಮಗಳೇನು;</td><td>ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಸಮೀಕ್ಷೆಯಲ್ಲಿ ಗುರುತಿಸಿ, ದಾಖಲಾಗದ ಮಕ್ಕಳನ್ನು ಶಾಲೆಗೆ ತರಲು ಶೈಕ್ಷಣಿಕ ತಂಡಗಳನ್ನು ರೂಪಿಸಿ ಮನೆ–ಮನೆ ಭೇಟಿ ನೀಡಿ ವಿದ್ಯಾರ್ಥಿಗಳು ಮತ್ತು ಪಾಲಕರ ಮನವೊಲಿಸಿ ಶಾಲೆಗೆ ದಾಖಲಿಸಲು ಪ್ರಯತ್ನಿಸಲಾಗುವುದು.</td></tr>
<tr><td>ಋ)</td><td>ಕಳೆದ 5 ಶೈಕ್ಷಣಿಕ ಸಾಲುಗಳಲ್ಲಿ ಗುರುತಿಸಲ್ಪಟ್ಟ ಶಾಲೆಯಿಂದ ಹೊರಗುಳಿದ ಮಕ್ಕಳ ಸಂಖ್ಯೆ ಎಷ್ಟು; (ಶೈಕ್ಷಣಿಕ ಸಾಲುವಾರು ಮಾಹಿತಿ ನೀಡುವುದು)</td><td>
<table>
<tr><th>ವರ್ಷ</th><th>ಶಾಲೆಯಿಂದ ಹೊರಗುಳಿದ ಮಕ್ಕಳ ಸಂಖ್ಯೆ</th><th>ಶಾಲಾ ಮುಖ್ಯ ವಾಹಿನಿಗೆ ತರಲಾದ ಮಕ್ಕಳ ಸಂಖ್ಯೆ</th><th>ಷರಾ</th></tr>
<tr><td>2020–21</td><td>–</td><td>–</td><td>ಕೋವಿಡ್–19 ಸಾಂಕ್ರಮಿಕ ಕಾರಣದಿಂದ ಸಮೀಕ್ಷೆ ಕೈಗೊಂಡಿರುವುದಿಲ್ಲ</td></tr>
<tr><td>2021–22</td><td>8476</td><td>4128</td><td>–</td></tr>
<tr><td>2022–23</td><td>14861</td><td>11707</td><td>–</td></tr>
<tr><td>2023–24</td><td>9461</td><td>8131</td><td>–</td></tr>
<tr><td>2024–25</td><td>9422</td><td>6187</td><td>2023–24ನೇ ಸಾಲಿನಲ್ಲಿ ಶಾಲಾ ಹಂತದ ಸಮೀಕ್ಷೆಯಲ್ಲಿ ಗುರುತಿಸಲಾದ 9422</td></tr>
</table>
</td></tr>
</table>

| | | | | | |
|---|---|---|---|---|---|
| | | | | | ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲೆಗೆ ದಾಖಲಿಸುವ ಕಾರ್ಯ ಪ್ರಗತಿಯಲ್ಲಿರುತ್ತದೆ. |

**ಸಂಖ್ಯೆ:** ಇಪಿ 86 ಪಿಎಂಸಿ 2025

(ಎಸ್.ಮಧು ಬಂಗಾರಪ್ಪ)

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು